ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ರಾಜ್ಯದಲ್ಲಿ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳನ್ನು ಸ್ಥಾಪಿಸಲು ರೈತರಿಗೆ ದೊರೆಯುವ ಸೌಲಭ್ಯಗಳ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು):-

1562 (1788) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಸಗಿ ರೇಷ್ಮೆ ಚಾಕಿ ಸಾಕಾಣಿಕಾ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; (ಹೆಸರು, ವಿಳಾಸ ಮತ್ತು ವಾರ್ಷಿಕ ಉತ್ಪಾದನಾ ಸಾಮರ್ಥ್ಯದ ಸಂಪೂರ್ಣ ವಿವರಗಳನ್ನು ಪ್ರತಿ ಕೇಂದ್ರಕ್ಕೆ ಸಂಬಂಧಿಸಿದಂತೆ ನೀಡುವುದು)

(ಆ) ರಾಜ್ಯದಲ್ಲಿ ಖಾಸಗಿ ಚಾಕಿ ಸಾಕಾಣಿಕಾ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ನಿಗಧಿಪಡಿಸಿರುವ ಮಾನದಂಡ ಹಾಗೂ ನಿಯಮಗಳೇನು;

(ಇ) ಈ ರೀತಿಯ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದಿಂದ ದೊರೆಯುವ ಸಾಲ, ಸಹಾಯಧನ, ಪ್ರೋತ್ಸಾಹಧನ ಮುಂತಾದ ಸೌಲಭ್ಯಗಳ ಸಂಪೂರ್ಣ ವಿವರಗಳನ್ನು ಸಂಬಂಧಿಸಿದ ಆದೇಶದ ಪ್ರತಿಗಳೊಡನೆ ನೀಡುವುದು ;

(ಈ) ರಾಜ್ಯದಲ್ಲಿ ಇದುವರೆಗೂ ಎಷ್ಟು ಮತ್ತು ಯಾವ ಚಾಕಿ ಸಾಕಾಣಿಕಾ ಕೇಂದ್ರಗಳಿಗೆ ಸಾಲ ಸಹಾಯಧನ ಮುಂತಾದ ಸೌಲಭ್ಯಗಳನ್ನು ನೀಡಲಾಗಿದೆ ? (ಪ್ರತಿ ಕೇಂದ್ರದ ಹೆಸರು, ವಿಳಾಸ ಹಾಗೂ ದೊರೆತಿರುವ ಆರ್ಥಿಕ ಸೌಲಭ್ಯದ ಸಂಪೂರ್ಣ ವಿವರಗಳನ್ನು ಪ್ರತಿ ಕೇಂದ್ರವಾರು ನೀಡುವುದು)